# ಇಂದಿನಿಂದ ಆ.15ರವರೆಗೆ ಹಸಿರು ಮಾರ್ಗದ ಮೆಟ್ರೊ ರೈಲು ಸೇವೆಯಲ್ಲಿ ವ್ಯತ್ಯಯ

ಬೆಂಗಳೂರು, ಆ.12: ಹಸಿರು ಮಾರ್ಗದ ನಾಗಸಂದ್ರ ಮತ್ತು ರೇಷ್ಮೆಸಂಸ್ಥೆ ನಡುವೆ ಆ.13ರಿಂದ ಆ.15ರವರೆಗೆ ಮೆಟ್ರೊ ರೈಲು ಸೇವೆಯಲ್ಲಿ ವ್ಯತ್ಯಯವಾಗಲಿದೆ ಎಂದು ನಮ್ಮ ಮೆಟ್ರೊ ಸೋಮವಾರ ಪ್ರಕಟನೆ ಹೊರಡಿಸಿದೆ.

ನಾಗಸಂದ್ರದಿಂದ ಮಾದಾವರವರೆಗಿನ ರೀಚ್-3ರ ವಿಸ್ತೃತ ಮಾರ್ಗದಲ್ಲಿ ಸಿಗ್ನಲಿಂಗ್ ಪರೀಕ್ಷೆಗಳನ್ನು ನಡೆಸಬೇಕಾಗಿರುವುದರಿಂದ, ಪೀಣ್ಯ ಇಂಡಸ್ಟ್ರಿ ಹಾಗೂ ನಾಗಸಂದ್ರ ಮೆಟ್ರೊ ನಿಲ್ದಾಣಗಳ ನಡುವೆ ರೈಲು ಸಮಯದಲ್ಲಿ ವ್ಯತ್ಯಯವಾಗಲಿದೆ.

ನಾಗಸಂದ್ರ ನಿಲ್ದಾಣದಿಂದ ಆ.13 ಮತ್ತು ಆ.14ರಂದು ಕೊನೆಯ ರೈಲು ಸೇವೆಯು ರಾತ್ರಿ 11.05 ಗಂಟೆಯ ಬದಲಾಗಿ 10 ಗಂಟೆಗೆ ಕೊನೆಗೊಳ್ಳುತ್ತದೆ. ಆ.14 ಮತ್ತು ಆ.15ರಂದು ನಾಗಸಂದ್ರದಿಂದ ಮೊದಲ ರೈಲುಸೇವೆಯು ಬೆಳಗ್ಗೆ 5ಗಂಟೆಗೆ ಬದಲಾಗಿ 6ಕ್ಕೆ ಪ್ರಾರಂಭವಾಗುತ್ತದೆ.

ಪೀಣ್ಯ ಇಂಡಸ್ಟ್ರಿಯಿಂದ ರೇಷ್ಮೆ ಸಂಸ್ಥೆ ಮೆಟ್ರೊ ನಿಲ್ದಾಣಗಳ ನಡುವೆ ಆ.13 ಮತ್ತು ಆ.14ರಂದು ರಾತ್ರಿ 11:12 ಗಂಟೆಯ ವರೆಗೆ ಕೊನೆಯ ರೈಲುಸೇವೆ ಲಭ್ಯವಿರುತ್ತದೆ. ಆ.14 ಮತ್ತು ಆ.15ರಂದು ಬೆಳಗ್ಗೆ 5ಗಂಟೆಗೆ ಪ್ರಾರಂಭವಾಗುತ್ತದೆ. ನೇರಳೆ ಮಾರ್ಗದ ಮೆಟ್ರೊ ಸೇವೆಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಪ್ರಕಟನೆ ತಿಳಿಸಿದೆ.

# ಟೋಕನ್ ಬದಲಿಗೆ ಪೇಪರ್ ಟಿಕೆಟ್

ಬೆಂಗಳೂರು, ಆ. 12: ಲಾಲ್‌ಬಾಗ್‌ನಲ್ಲಿ ಆಯೋಜಿಸಲಾಗಿರುವ ತೋಟಗಾರಿಕಾ ಫಲಪುಷ್ಪ ಪ್ರದರ್ಶನದ ಹಿನ್ನಲೆಯಲ್ಲಿ, ನಮ್ಮ ಮೆಟ್ರೊ ಆ.15, ಆ.17 ಮತ್ತು ಆ.18ರಂದು ಟೋಕನ್‌ಗಳ ಬದಲಿಗೆ ರಿಟರ್ನ್ ಜರ್ನಿ ಪೇಪರ್ ಟಿಕೆಟ್‌ಗಳನ್ನು ನೀಡಲಾಗುವುದು.

ಲಾಲ್‌ಬಾಗ್ ಮೆಟ್ರೊ ನಿಲ್ದಾಣದಲ್ಲಿ ಪ್ರಯಾಣಿಕರ ತ್ವರಿತ ಪ್ರಯಾಣಕ್ಕಾಗಿ ಮೇಲ್ಕಂಡ ದಿನಾಂಕಗಳ ಬೆಳಗ್ಗೆ 10ರಿಂದ ರಾತ್ರಿ 8ರವರೆಗೆ ಟೋಕನ್‌ಗಳ ಬದಲಿಗೆ ರಿಟರ್ನ್ ಜರ್ನಿ ಪೇಪರ್ ಟಿಕೆಟ್‌ಗಳನ್ನು 30 ರೂ. ನಗದು ಮುಖಾಂತರ ವಿತರಿಸಲಾಗುತ್ತದೆ.

ರಿಟರ್ನ್ ಜರ್ನಿ ಪೇಪರ್ ಟಿಕೆಟ್‌ಗಳು ಖರೀದಿಸಿದ ದಿನದಂದು ಲಾಲ್‌ಬಾಗ್ ಮೆಟ್ರೊ ನಿಲ್ದಾಣದಿಂದ ಯಾವುದೇ ಮೆಟ್ರೊ ನಿಲ್ದಾಣಕ್ಕೆ ಪ್ರಯಾಣಿಸಲು ಮಾನ್ಯವಾಗಿರುತ್ತದೆ. ಸಾರ್ವಜನಿಕರು ಟೋಕನ್, ಕಾರ್ಡ್, ಕ್ಯೂಆರ್ ಟಿಕೆಟ್‌ಗಳ ಮೂಲಕ ಲಾಲ್‌ಬಾಗ್ ನಿಲ್ದಾಣಕ್ಕೆ ಪ್ರಯಾಣಿಸಬಹುದು ಹಾಗೂ ಲಾಲ್‌ಬಾಗ್ ಮೆಟ್ರೊ ನಿಲ್ದಾಣದಿಂದ ಹಿಂತಿರುಗಲು ಟೋಕನ್‌ಗಳ ಬದಲಿಗೆ ಪೇಪರ್ ಟಿಕೆಟ್, ಕಾರ್ಡ್ ಮತ್ತು ಕ್ಯೂಆರ್ ಟಿಕೆಟ್ ಮೂಲಕ ಮಾತ್ರ ಪ್ರಯಾಣಿಸಬಹುದು ಎಂದು ಪ್ರಕಟನೆ ತಿಳಿಸಿದೆ.

# ಬೀಟ್ ಪೊಲೀಸ್ ವ್ಯವಸ್ಥೆ ಇನ್ನಷ್ಟು ಬಲಪಡಿಸಲು ಕ್ರಮ: ಪಶ್ಚಿಮ ವಲಯ ಡಿಐಜಿಪಿ

ಮಂಗಳೂರು, ಆ.12: ಪಶ್ಚಿಮ ವಲಯದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೀಟ್ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಲಾಗುತ್ತಿದ್ದು, ಬೀಟ್ ಪೊಲೀಸರಿಗೆ ಹೆಚ್ಚಿನ ಜವಾಬ್ದಾರಿಯನ್ನು ನೀಡಲಾಗುವುದು ಎಂದು ಪಶ್ಚಿಮ ವಲಯ ಡಿಐಜಿಪಿ ಅಮಿತ್ ಸಿಂಗ್ ತಿಳಿಸಿದ್ದಾರೆ.

ಸೋಮವಾರ 'ವಾರ್ತಾಭಾರತಿ' ಜೊತೆ ಮಾತನಾಡಿದ ಅವರು, ಗ್ರಾಮ, ವಾರ್ಡ್‌ಗಳ ಬೀಟ್ ಪೊಲೀಸರು ಇಲಾಖೆ ಮತ್ತು ಜನರ ನಡುವೆ ಸಂವಹನ ಸೇತುವಾಗಿ ಕಾರ್ಯನಿರ್ವಹಿಸಲಿದ್ದಾರೆ. ತಮ್ಮ ವ್ಯಾಪ್ತಿಗೊಳಪಟ್ಟ ಪಶ್ಚಿಮ ವಲಯದ ದ.ಕ., ಉಡುಪಿ,ಚಿಕ್ಕಮಗಳೂರು ಮತ್ತು ಉತ್ತರ ಕನ್ನಡ ಜಿಲ್ಲೆಗಳ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಈ ಬಗ್ಗೆ ಸೂಚನೆ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಅಪರಾಧ ಚಟುವಟಿಕೆಗಳಿಗೆಗಳಿಗೆ ಕಡಿವಾಣ ಹಾಕಲು, ಪ್ರಮುಖ, ಸೂಕ್ಷ್ಮ ಮತ್ತು ಕೋಮು ವೈಷಮ್ಯ, ಪೊಕ್ಸೊ ಪ್ರಕರಣಗಳ ತನಿಖೆಯನ್ನು ತ್ವರಿತಗತಿಯಲ್ಲಿ ನಡೆಸಲು ಬೀಟ್ ಪೊಲೀಸ್ ವ್ಯವಸ್ಥೆ ಪರಿಣಾಮಕಾರಿ ಅನುಷ್ಠಾನದಿಂದ ಸಾಧ್ಯವಿದೆ ಎಂದರು.

ಪ್ರಕರಣದಲ್ಲಿ ಭಾಗಿಯಾದ ತಪ್ಪಿತಸ್ಥರಿಗೆ ಕಠಿಣ ಸಜೆಯಾಗಬೇಕು. ಅವರು ವ್ಯವಸ್ಥೆಯ ಲೋಪದೋಷಗಳ ಕಾರಣದಿಂದಾಗಿ ಶಿಕ್ಷೆಯಿಂದ ಪಾರಾಗುವುದನ್ನು ತಡೆಗಟ್ಟುವ ಉದ್ದೇಶದಿಂದ ಬೀಟ್ ಪೊಲೀಸರಿಗೆ ಹೆಚ್ಚಿನ ಜವಾಬ್ದಾರಿಯನ್ನು ನೀಡಲು ಉದ್ದೇಶಿಸಲಾಗಿದೆ ಎಂದು ಅವರು ಹೇಳಿದರು.

ಪೊಲೀಸ್ ವಾರಂಟ್, ಪಾಸ್‌ಪೋರ್ಟ್‌ಗೆ ವೈಕ್ತಿಗತ ಪರಿಶೀಲನೆ ನಡೆಸುವ ಪೊಲೀಸರು ಇನ್ನು ಮುಂದೆ ಗ್ರಾಮದಲ್ಲಿ ಏನು ನಡೆಯುತ್ತಿದೆ, ಅರ್ಜಿದಾರರು ಕೊಟ್ಟ ಅರ್ಜಿ ಏನಾಯಿತು, ಪ್ರಕರಣದ ವಿಚಾರಣೆ ನ್ಯಾಯಾಲಯದಲ್ಲಿ ಯಾವಾಗ ನಡೆಯಲಿದೆ, ಸಾಕ್ಷಿದಾರರು ನ್ಯಾಯಾಲಯಕ್ಕೆ ಯಾವಾಗ ಹಾಜರಾಗಬೇಕು ಎನ್ನುವುದನ್ನು ಸಂಬಂಧಪಟ್ಟವರಿಗೆ ಮಾಹಿತಿ ನೀಡಲಿದ್ದಾರೆ ಎಂದರು.

ವಿಚಾರಣೆಯ ದಿನಾಂಕದ ಬಗ್ಗೆ ಬೀಟ್ ಪೊಲೀಸರು ತಮ್ಮ ಬಳಿ ಮಾಹಿತಿಯನ್ನು ಇಟ್ಟುಕೊಂಡಿರುತ್ತಾರೆ. ಕೆಲವೊಮ್ಮೆ ಸಾಕ್ಷಿಗಳು ಪ್ರಕರಣದಿಂದ ದೂರ ಸರಿದರೆ ಆ ಪ್ರಕರಣದ ನೈಜ ಆರೋಪಿಗಳು ಶಿಕ್ಷೆಯಿಂದ ಪಾರಾಗುತ್ತಾರೆ. ಇದನ್ನು ತಪ್ಪಿಸಲು ಪೊಲೀಸರು ಸಾಕ್ಷಿಗಳೊಂದಿಗೆ ಸಂಪರ್ಕ ಕಲ್ಪಿಸಿ ಅವರಿಗೆ ವ್ಯವಸ್ಥೆಯಲ್ಲಿ ವಿಶ್ವಾಸವನ್ನು ಮೂಡಿಸಲು ನೆರವಾಗಲಿದ್ದಾರೆ. ಘಟನೆ ಅಥವಾ ಪ್ರಕರಣ ದಾಖಲಾದಾಗ ಅಲ್ಲಿನ ಬೀಟ್ ಪೊಲೀಸರು ತಳಮಟ್ಟದಿಂದ ಮಾಹಿತಿ ಸಂಗ್ರಹಿಸಿ ತನಿಖೆಗೆ ನೆರವಾಗಲಿದ್ದಾರೆ ಎಂದು ಡಿಐಜಿಪಿ ಹೇಳಿದರು.

ಯುವಕರು, ವಿದ್ಯಾರ್ಥಿಗಳನ್ನು ಡ್ರಗ್ಸ್ ಸೇವೆನೆ ಚಟದಿಂದ ಪಾರು ಮಾಡಲು ಸೂಕ್ತಕ್ರಮ ಕೈಗೊಳ್ಳಬೇಕಾಗಿದೆ. ಸೈಬರ್ ಕ್ರೈಮ್ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಇದರ ನಿಯಂತ್ರಣ ಪೊಲೀಸರಿಗೆ ಸವಾಲಾಗಿದೆ. ವಂಚಕರು ಹಲವರ ಬ್ಯಾಂಕ್ ಖಾತೆಗಳಲ್ಲಿರುವ ಹಣವನ್ನು ಸದ್ದಿಲ್ಲದೆ ಬರಿದು ಮಾಡುತ್ತಿದ್ದಾರೆ. ಆನ್‌ಲೈನ್ ಮೂಲಕ ವಂಚನೆ ಪ್ರಕರಣಗಳು ಮಾಧ್ಯಮಗಳಲ್ಲಿ ಆಗಾಗ ವರದಿಯಾಗುತ್ತಿದರೂ, ಅಮಾಯಕರು ವಂಚಕರ ಮಾಯಾಜಾಲಕ್ಕೆ ಸಿಲುಕಿ ಹಣ ಕಳೆದುಕೊಳ್ಳುತ್ತಿದ್ದಾರೆ ಎಂದರು. ಬ್ಯಾಂಕ್‌ನಲ್ಲಿ ತಮ್ಮ ಖಾತೆಯ ವಿವರಗಳನ್ನು ಇತರರೊಂದಿಗೆ ಹಂಚಿಕೊಳ್ಳದಂತೆ ಮತ್ತು ಮೂರನೇ ವ್ಯಕ್ತಿಯ ಅಪ್ಲಿಕೇಶನ್‌ಗಳನ್ನು ಡೌನ್‌ಲೋಡ್ ಮಾಡದಿರುವಂತೆ ಜನರಲ್ಲಿ ಅರಿವು ಮೂಡಿಸಲು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಅಮಿತ್ ಸಿಂಗ್ ಮಾಹಿತಿ ನೀಡಿದ್ದಾರೆ.

## ಸೈಬರ್ ಕ್ರೈಮ್ ನಿಯಂತ್ರಣಕ್ಕೆ ಕ್ರಮ: ಎಸ್ಪಿ

ಸೈಬರ್ ಕ್ರೈಮ್ ಬಗ್ಗೆ ಜಾಗೃತಿ ಮತ್ತು ಡ್ರಗ್ಸ್ ಸೇವೆನೆಯ ಕೆಟ್ಟ ಪರಿಣಾಮಗಳ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಅಭಿಯಾನ ಶಾಲಾ, ಕಾಲೇಜುಗಳಲ್ಲಿ ನಡೆಯುತ್ತಿದೆ. ಸಾರ್ವಜನಿಕರಲ್ಲಿ ಸೈಬರ್ ಕ್ರೈಮ್ ಬಗ್ಗೆ ಜಾಗೃತಿ ಅಭಿಯಾನವನ್ನು ಪರಿಣಾಮಕಾರಿಯಾಗಿ ನಡೆಸಲಾಗುವುದು ಎಂದು ದ.ಕ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯತೀಶ್ ಎನ್. ಮಾಹಿತಿ ನೀಡಿದ್ದಾರೆ.

# ಜಿಲ್ಲಾ ವಕ್ಫ್ ಅಧಿಕಾರಿ ಅಮಾನತುಗೊಳಿಸಿ ಝುಮೀರ್ ಅಹ್ಮದ್ ಆದೇಶ

ಬೆಂಗಳೂರು, ಆ.12: ಬೆಂಗಳೂರು ಜಿಲ್ಲಾ ವಕ್ಫ್ ಅಧಿಕಾರಿ ಸೈಯದ್ ಅಕ್ಬರ್ ಖಾನ್ ಅವರನ್ನು ಅಮಾನತುಗೊಳಿಸಲು ವಸತಿ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವ ಝುಮೀರ್ ಅಹ್ಮದ್ ಖಾನ್ ಆದೇಶ ನೀಡಿದ್ದಾರೆ.

ಸೋಮವಾರ ನಗರದ ಕನ್ನಿಂಗ್ ಹ್ಯಾಮ್ ರಸ್ತೆಯಲ್ಲಿರುವ ರಾಜ್ಯ ವಕ್ಫ್ ಬೋರ್ಡ್ ಕಚೇರಿಯಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಕಳೆದ ಬಾರಿ ನಡೆಸಿದ ಸಭೆಯಲ್ಲಿ ತಾವು ನೀಡಿದ್ದಂತಹ ಸೂಚನೆಗಳ ಅನುಷ್ಠಾನದ ಕುರಿತು ಅಧಿಕಾರಿಗಳು ಸಮರ್ಪಕ ಉತ್ತರ ನೀಡದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ಬೆಂಗಳೂರು ಜಿಲ್ಲಾ ವಕ್ಫ್ ಅಧಿಕಾರಿ ಸೈಯದ್ ಅಕ್ಬರ್ ಖಾನ್ ಅವರನ್ನು ಅಮಾನತುಗೊಳಿಸಿ, ಇನ್ನಿಬ್ಬರು ಅಧಿಕಾರಿಗಳಾದ ಅಬ್ದುಲ್ ಖಲೀಲ್ ಮತ್ತು ಸದ್ದಾಂ ಹುಸೇನ್ ಅವರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡುವಂತೆ ವಕ್ಫ್ ಬೋರ್ಡ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಝುಮೀರ್ ಅಹ್ಮದ್ ಖಾನ್ ಸೂಚನೆ ನೀಡಿದ್ದಾರೆ.

ಬೆಂಗಳೂರಿನ ವಕ್ಫ್ ಆಸ್ತಿಗಳ ದಾಖಲಾತಿಗಳನ್ನು ಸಮರ್ಪಕವಾಗಿಡುವುದು, ವಕ್ಫ್ ಆಸ್ತಿಗಳ ರಕ್ಷಣೆ, ಒತ್ತುವರಿ ತೆರವು ಸೇರಿದಂತೆ ಇನ್ನಿತರ ವಿಷಯಗಳ ಕುರಿತು ಕಳೆದ ಸಭೆಯಲ್ಲಿ ತಾವು ನೀಡಿದ್ದ ನಿರ್ದೇಶನಗಳ ಅನುಷ್ಠಾನ ಯಾವ ರೀತಿಯಲ್ಲಿ ಆಗಿದೆ ಎಂದು ಅಧಿಕಾರಿಗಳನ್ನು ಪ್ರಶ್ನಿಸಿದೆ. ಈ ಸಂಬಂಧ ಅಧಿಕಾರಿಗಳಿಂದ ಸಮಾಧಾನಕರವಾದ ಉತ್ತರ ಬಾರದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಂಡಿರುವುದಾಗಿ ಅವರು ತಿಳಿಸಿದ್ದಾರೆ.

ರಾಜ್ಯಾದ್ಯಂತ ವಕ್ಫ್ ಆಸ್ತಿಗಳ ರಕ್ಷಣೆಗಾಗಿ ಕಾಂಪೌಂಡ್ ಹಾಕುವ ಮಾದರಿಯನ್ನು ವಕ್ಫ್ ಇಲಾಖೆ ಅಳವಡಿಸಿಕೊಂಡಿದೆ. ಎಲ್ಲೆಲ್ಲಿ ಫೆನ್ಸಿಂಗ್ ಅಗತ್ಯವಿದೆಯೋ ಅಲ್ಲೆಲ್ಲ ಒಂದೇ ಮಾದರಿಯ ಗೋಡೆಗಳನ್ನು ನಿರ್ಮಿಸಲಾಗುವುದು ಎಂದು ಅವರು ಹೇಳಿದ್ದಾರೆ. ಸಭೆಯಲ್ಲಿ ರಾಜ್ಯ ವಕ್ಫ್ ಬೋರ್ಡ್ ಅಧ್ಯಕ್ಷ ಅನ್ವರ್ ಬಾಷಾ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿಲಾನಿ ಮೊಕಾಶಿ, ಸದಸ್ಯ ಆರ್.ಅಬ್ದುಲ್ ರಿಯಾಝ್ ಖಾನ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಕೆಸೆಟ್: ಆ.17ರಂದು ದಾಖಲೆ ಪರಿಶೀಲನೆ

ಬೆಂಗಳೂರು, ಆ.12: ಕೆಸೆಟ್ ಪರೀಕ್ಷೆಯಲ್ಲಿ ಅರ್ಹತೆ ಪಡೆದು, ವಿವಿಧ ಕಾರಣಗಳಿಂದ ಮೂಲ ದಾಖಲೆಗಳ ಪರಿಶೀಲನೆಗೆ ಒಳಪಡದವರ ಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸೋಮವಾರ ಪ್ರಕಟಿಸಿದ್ದು, ಅಂತಹವರು ಆ.17ರಂದು ಹಾಜರಾಗಿ ಕೆಸೆಟ್ ಪ್ರಮಾಣ ಪತ್ರ ಪಡೆಯಬಹುದು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ.

ಜು.11ರಿಂದ ಜು.22 ಹಾಗೂ ಜು.31ರಂದು ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲನೆ ಮಾಡಿ, ಪ್ರಮಾಣ ಪತ್ರ ಕೂಡ ನೀಡಲಾಗಿದೆ. ಕೆಲವರು ಆ ಸಂದರ್ಭದಲ್ಲಿ ಹಾಜರಾಗಿದ್ದರೂ ಪ್ರಮಾಣ ಪತ್ರ ಕೊಟ್ಟಿರಲಿಲ್ಲ. ಅಂತಹವರು ನಂತರ ಮೂಲ ದಾಖಲೆಗಳನ್ನು ಕೊಟ್ಟು ಮನವಿ ಮಾಡಿದ್ದರ ಹಿನ್ನೆಲೆಯಲ್ಲಿ ತಜ್ಞರ ಸಮಿತಿ ಪರಿಶೀಲಿಸಿ, ಯಾರೆಲ್ಲ ಪ್ರಮಾಣ ಪತ್ರ ಪಡೆಯಲು ಅರ್ಹರು ಎಂಬುದನ್ನು ತೀರ್ಮಾನಿಸಿದೆ. ಅಂತಹವರ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಆ.17ರಂದು ಬೆಳಗ್ಗೆ 10ಗಂಟೆಗೆ ಮೂಲ ದಾಖಲೆ ಸಮೇತ ಹಾಜರಾಗಿ ಪ್ರಮಾಣ ಪತ್ರ ಪಡೆಯಬಹುದು. ಅನಿವಾರ್ಯ ಕಾರಣಗಳಿಂದ ಪರಿಶೀಲನೆ ಸಂದರ್ಭದಲ್ಲಿ ಗೈರುಹಾಜರಾಗಿದ್ದವರೂ ಅಂದು ಬಂದು ಪ್ರಮಾಣ ಪತ್ರಗಳನ್ನು ಪಡೆಯಬಹುದು ಎಂದು ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ನಾಳೆ ಐಪಿಡಿ ಸಾಲಪ್ಪ ವರದಿ ಕುರಿತು ವಿಚಾರ ಸಂಕಿರಣ

ಬೆಂಗಳೂರು, ಆ.12: ಬಿಬಿಎಂಪಿ ಪೌರ ಕಾರ್ಮಿಕರು, ನೇರ ವೇತನ ಪೌರಕಾರ್ಮಿಕರು ಮತ್ತು ಚಾಲಕರು ಶುಚಿಗಾರರ ಸಂಘಟನೆಗಳ ಒಕ್ಕೂಟದ ವತಿಯಿಂದ ಆ.14ರಂದು ನಗರದ ಗಾಂಧಿ ಭವನದಲ್ಲಿರುವ ಬಾಪೂ ಸಭಾಂಗಣದಲ್ಲಿ ಐಪಿಡಿ ಸಾಲಪ್ಪ ವರದಿ ಕುರಿತು ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ವೆಂಕಟರಮಣ ತಿಳಿಸಿದ್ದಾರೆ.

ನಗರದ ಪ್ರೆಸ್‌ಕ್ಲಬ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರಕಾರ ವರದಿಯನ್ನು ಸಂಪುಟ ಸಭೆಯಲ್ಲಿ ಮಂಡನೆ ಮಾಡಿ ಅನುಮೋದಿಸಿ, ಅದರಲ್ಲಿ 36 ಅಂಶಗಳನ್ನು ಒಪ್ಪಿ ಎಲ್ಲ ಪಾಲಿಕೆಗಳು, ನಗರಸಭೆಗಳು ಮತ್ತು ಪುರಸಭೆಗಳು ಪೌರಕಾರ್ಮಿಕರಿಗೆ ಇದರ ಆಧಾರದ ಮೇಲೆ ನೇಮಕಾತಿ ಮತ್ತು ಇತರ ಸೌಕರ್ಯಗಳನ್ನು ನೀಡುವಂತೆ ಸುತ್ತೋಲೆ ಹೊರಡಿಸಿತ್ತು. ಇಚ್ಛಾಶಕ್ತಿ ಇಲ್ಲದ ಅಧಿಕಾರಿಗಳಿಂದ ಇಂದಿಗೂ ಐಪಿಡಿ ಸಾಲಪ್ಪ ವರದಿಯನ್ನು ಸಂಪೂರ್ಣ ಜಾರಿಗೆ ತಂದಿಲ್ಲ. ಈ ಕುರಿತು ಪೌರಕಾರ್ಮಿಕರಲ್ಲಿ ಸಾಲಪ್ಪ ವರದಿಯಲ್ಲಿನ ವಿಚಾರಗಳನ್ನು ಅರಿತು ಕೊಳ್ಳಲು ಕಾರ್ಯಾಗಾರ ನಡೆಸುತ್ತಿದ್ದೇವೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ, ಬಿಬಿಎಂಪಿ ಆಯುಕ್ತರು ವಿಚಾರ ಸಂಕಿರಣದಲ್ಲಿ ಭಾಗವಹಿಸಲಿದ್ದಾರೆ ಎಂದು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕಾರ್ಯಾಧ್ಯಕ್ಷ ಸೂರ್ಯಚಂದ್ರ ಮಂಜಣ್ಣ, ಪ್ರಧಾನ ಕಾರ್ಯದರ್ಶಿಗಳಾದ ಓಬಲೇಶ್, ಮುತ್ಯಾಲಪ್ಪ ಮುರಳಿ, ತ್ಯಾಗರಾಜ್ ಉಪಸ್ಥಿತರಿದ್ದರು.

## ಆ.17ಕ್ಕೆ ನೂಪುರ್ ಡ್ಯಾನ್ಸ್ ಉತ್ಸವ

ಬೆಂಗಳೂರು, ಆ.12: ನೂಪುರ್ ಪರ್ಫಾರ್ಮಿಂಗ್ ಆರ್ಟ್ಸ್ ಸೆಂಟರ್ ವತಿಯಿಂದ ಆ.17ರ ಸಂಜೆ 5ಗಂಟೆಗೆ ಮದಾಯಿ ಆಡಿಟೋರಿಯಂನಲ್ಲಿ ನೂಪುರ್ ಡ್ಯಾನ್ಸ್ ಉತ್ಸವವನ್ನು ಹಮ್ಮಿಕೊಳ್ಳಲಾಗಿದೆ ಎಂದು ಉತ್ಸವದ ಕಾರ್ಯದರ್ಶಿ ಸಿರಿಶಾ ತಿಳಿಸಿದ್ದಾರೆ.

ನಗರದ ಪ್ರೆಸ್‌ಕ್ಲಬ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೂಪುರ್ ನೃತ್ಯೋತ್ಸವವು ಕಲೆಯನ್ನು ಉತ್ತೇಜಿಸಲು ಮತ್ತು ಕಲಾವಿದರಿಗೆ ಅವಕಾಶಗಳನ್ನು ಒದಗಿಸಲು ಮೀಸಲಾಗಿರುವ ವೇದಿಕೆಯಾಗಿದೆ. ಉದ್ಘಾಟನಾ ಪ್ರದರ್ಶನದಲ್ಲಿ ಹರಿಯವರ ಮಾರ್ಗದರ್ಶನದಲ್ಲಿ ಮಹೇಶ್ ನೃತ್ಯ ಮಾಡಲಿರುವ ಸಾಂಪ್ರದಾಯಿಕ ಕಥಕ್ ರೆಪರ್ಟರಿಯನ್ನು ಪ್ರಸ್ತುತಪಡಿಸಲಿದ್ದಾರೆ ಎಂದು ತಿಳಿಸಿದರು.

ಕಲಾಶ್ರೀ ಗುರು ಸತ್ಯನಾರಾಯಣ ರಾಜು ಅವರು ಏಕವ್ಯಕ್ತಿ ವಿಷಯಾಧಾರಿತ ನಿರ್ಮಾಣ-ರಾಮ ಕಥಾವನ್ನು ಪ್ರಸ್ತುತಪಡಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಗೀತ ನೃತ್ಯ ಅಕಾಡಮಿ ಅಧ್ಯಕ್ಷೆ ಶುಭ ಧನಂಜಯ್ ಭಾಗವಹಿಸಲಿದ್ದಾರೆ ಎಂದು ಸಿರಿಶಾ ಮಾಹಿತಿ ನೀಡಿದರು.

# ಸರಕಾರದ ವಿರುದ್ಧ ಹಕ್ಕುಚ್ಯುತಿ ಮಂಡನೆ

## ಛಲವಾದಿ ನಾರಾಯಣಸ್ವಾಮಿ

ಬೆಂಗಳೂರು, ಆ.12: ವಿಪಕ್ಷದ ನಾಯಕನಿಗೆ ನೀಡಬೇಕಾದ ಶಿಷ್ಟಾಚಾರವನ್ನು ಉಲ್ಲಂಘಿಸಲಾಗಿದ್ದು, ರಾಜ್ಯ ಸರಕಾರದ ಈ ಧೋರಣೆ ವಿರೋಧಿಸಿ ಹಕ್ಕುಚ್ಯುತಿ ಮಂಡಿಸುತ್ತೇನೆ ಎಂದು ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದ್ದಾರೆ.

ಸೋಮವಾರ ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ನನ್ನ ಸ್ಥಾನಮಾನಕ್ಕೆ ಅನ್ವಯ ಶಿಷ್ಟಾಚಾರ ಪಾಲನೆ ಮಾಡಿಲ್ಲ. ಹೀಗಾಗಿ ನಾನು ಹಕ್ಕುಚ್ಯುತಿ ಮಂಡನೆ ಮಾಡುತ್ತೇನೆ. ನನಗೆ ಏನೂ ಬೇಕಾಗಿಲ್ಲ. ನನ್ನ ಹಕ್ಕಿಗೆ ಚ್ಯುತಿಯಾದರೆ ಯಾರು ಹೊಣೆ? ನನ್ನ ಮೇಲೆ ಹಗೆತನ ಯಾಕೆ? ನನಗೆ ಕೊಡಬೇಕಾದ ಸವಲತ್ತು ನೀಡಲು ಯಾವಾಗ ಸಭೆ ನಡೆಸುತ್ತೀರಿ? ಇದೆಲ್ಲಾ ಉದ್ದೇಶಪೂರ್ವಕವಾಗಿ ಮಾಡುತ್ತಿದ್ದಾರೆ ಎಂದು ದೂರಿದರು.

ನಿವಾಸಕ್ಕೆ ಭದ್ರತೆಯೂ ಇಲ್ಲ. ಇದು ನನ್ನ 